**ಚಿಕ್ಕಬಳ್ಳಾಪುರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ,**

**ಅಧಿಸೂಚನೆ ಸಂಖ್ಯೆ– ADM. 01 /2023**

**ದಿನಾಂಕ – 06 ನೇ ಡಿಸೆಂಬರ್ 2023**

ವಿಷಯ – ಶೀಘ್ರಲಿಪಿಗಾರ ಗ್ರೇಡ್ III, ಬೆರಳಚ್ಚುಗಾರ, ಬೆರಳಚ್ಚು–ನಕಲುಗಾರ, ಆದೇಶ ಜಾರಿಗಾರ, ಚಾಲಕ ಮತ್ತು ಜವಾನ ಹುದ್ದೆಗಳ ನೇರ ನೇಮಕಾತಿ ಬಗ್ಗೆ.

ಉಲ್ಲೇಖ – 1) ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ DJA–II (LCA–II) - 128/2012 ದಿನಾಂಕ 11/09/2023.

2) ಕರ್ನಾಟಕ ಅಧೀನ ನ್ಯಾಯಾಲಯಗಳ ಲಿಪಿಕ ಮತ್ತು ಇತರ ಹುದ್ದೆಗಳ ನೇಮಕಾತಿ ತಿದ್ದುಪಡಿ ನಿಯಮಗಳು 2021.

3) ಕರ್ನಾಟಕ ನಾಗರೀಕ ಸೇವಾ (ಶೀಘ್ರಲಿಪಿಗಾರರ ಹಾಗೂ ಬೆರಳಚ್ಚುಗಾರರ ಹುದ್ದೆಗಳಿಗೆ ನೇಮಕಾತಿ) ನಿಯಮಗಳು 1983.

4) ಈ ನ್ಯಾಯಾಲಯದ ಕಛೇರಿ ಟಿಪ್ಪಣಿ ಮತ್ತು ಆದೇಶದ ದಿನಾಂಕ 08/11/2023.

**ಆನ್ ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ** – 17/01/2024.

ಚಿಕ್ಕಬಳ್ಳಾಪುರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಕೆಳಗೆ ನಮೂದಿಸಿರುವಂತೆ ಖಾಲಿ ಇರುವ **ಶೀಘ್ರಲಿಪಿಗಾರ ಗ್ರೇಡ್ III, ಬೆರಳಚ್ಚುಗಾರ, ಬೆರಳಚ್ಚು–ನಕಲುಗಾರ, ಆದೇಶ ಜಾರಿಗಾರ, ಚಾಲಕ ಮತ್ತು ಜವಾನರ** ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ಅರ್ಜಿಗಳನ್ನು ಚಿಕ್ಕಬಳ್ಳಾಪುರದ ಜಿಲ್ಲಾ ನ್ಯಾಯಾಲಯದ ಅಧಿಕೃತ ವೆಬ್ ಸೈಟ್ **https://chikkaballapur.dcourts.gov.in/Judges/online-recruitment/** ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್ ಲೈನ್ ನಲ್ಲಿ **ದಿನಾಂಕ 18/12/2023 ರಿಂದ ದಿನಾಂಕ 17/01/2024 11.59** ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

**1) ಶೀಘ್ರಲಿಪಿಗಾರ (ಗ್ರೇಡ್ III) ಹುದ್ದೆಗಳ ಸಂಖ್ಯೆ – 08**

**ಹುದ್ದೆಗಳ ವರ್ಗೀಕರಣ –**

| ವರ್ಗೀಕರಣ | ಮಹಿಳೆ | ಗ್ರಾಮೀಣ | ಇತರೆ | ಕನ್ನಡ ಮಾಧ್ಯಮ | ಮಾಜಿ ಸೈನಿಕ | ಒಟ್ಟು |
|---|---|---|---|---|---|---|
| ಸಾ.ಅ. | 01 | 01 | – | 01 | 01 | 04 |
| ಪರಿಶಿಷ್ಟ ಜಾತಿ | – | 02 | – | -- | – | 02 |
| ಪ್ರವರ್ಗ 2-ಎ | – | – | – | -- | 01 | 01 |
| ಪ್ರವರ್ಗ 3-ಎ | – | – | 01 | -- | – | 01 |
| ಒಟ್ಟು | 01 | 03 | 01 | 01 | 02 | 08 |

(1) ವೇತನ ಶ್ರೇಣಿ – 27650-650-29600-750-32600-850-36000-950-39800-1100-46400-1250-52650 ಹಾಗೂ ಇತರೆ ಭತ್ಯೆಗಳು.

**(2) ಶೈಕ್ಷಣಿಕ ವಿದ್ಯಾರ್ಹತೆ –**

ಪದವಿಪೂರ್ವ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ಮೂರು ವರ್ಷಗಳ ಡಿಪ್ಲೊಮಾ ಕಮರ್ಷಿಯಲ್ ಪ್ರಾಕ್ಟೀಸ್ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ. ಸಾರ್ವಜನಿಕ ಶಿಕ್ಷಣ ಇಲಾಖೆಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಮತ್ತು ಶೀಘ್ರಲಿಪಿಯಲ್ಲಿ ಪ್ರೌಢ ದರ್ಜೆ ಉತ್ತೀರ್ಣತೆ ಅಥವಾ ಡಿಪ್ಲೊಮಾ ಕಮರ್ಷಿಯಲ್ ಪ್ರಾಕ್ಟೀಸ್ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

**ಆಯ್ಕೆ ವಿಧಾನ –**

ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) ನಿಯಮ 1982 ಮತ್ತು (ತಿದ್ದುಪಡಿ) ನಿಯಮ 2007 ಹಾಗೂ ಕಾಲಕಾಲಕ್ಕೆ ಆದ ತಿದ್ದುಪಡಿ ನಿಯಮಗಳ ಪ್ರಕಾರ.

(1) ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಪ್ರತಿ ನಿಮಿಷಕ್ಕೆ 120 ಪದಗಳ ವೇಗದಂತೆ 5 ನಿಮಿಷಗಳ ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಲಿಪ್ಯಂತರಿಸತಕ್ಕದ್ದು.

(2) ಪ್ರತಿ ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳದ್ದಾಗಿದ್ದು ಪ್ರತಿ ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಠ 50 ಅಂಕಗಳನ್ನು ಅಭ್ಯರ್ಥಿಗಳು ಪಡೆಯಲೇಬೇಕಾಗಿರುತ್ತದೆ. ಅರ್ಹತಾ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳನ್ನು **1:5** ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುತ್ತದೆ.

(3) ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾದವರು ಗಳಿಸಿರುವ ಶೇಕಡಾವಾರು ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

**2) ಬೆರಳಚ್ಚುಗಾರರ ಹುದ್ದೆಗಳ ಸಂಖ್ಯೆ– 14**

**ಹುದ್ದೆಗಳ ವರ್ಗೀಕರಣ –**

| ವರ್ಗೀಕರಣ | ಮಹಿಳೆ | ಗ್ರಾಮೀಣ | ಇತರೆ | ಕನ್ನಡ ಮಾಧ್ಯಮ | ಮಾಜಿ ಸೈನಿಕ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|
| ಸಾ.ಅ. | 03 | 02 | – | 01 | 01 | | 07 |
| ಪರಿಶಿಷ್ಟ ಜಾತಿ | 01 | – | 01 | –– | – | | 02 |
| ಪರಿಶಿಷ್ಟ ಪಂಗಡ | – | – | 01 | – | – | | 01 |
| ಪ್ರವರ್ಗ I | –– | – | 01 | – | – | | 01 |
| ಪ್ರವರ್ಗ 2–ಎ | – | 01 | – | –– | – | 01 | 02 |
| ಪ್ರವರ್ಗ 3–ಎ | – | 01 | –– | –– | – | | 01 |
| ಒಟ್ಟು | 04 | 04 | 03 | 01 | 01 | 01 | 14 |

(1) ವೇತನ ಶ್ರೇಣಿ - 21400-500-22400-550-24600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು.

**(2) ಶೈಕ್ಷಣಿಕ ವಿದ್ಯಾರ್ಹತೆ –**

ಪದವಿಪೂರ್ವ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ಮೂರು ವರ್ಷಗಳ ಡಿಪ್ಲೊಮಾ ಕಮರ್ಷಿಯಲ್ ಪ್ರಾಕ್ಟೀಸ್ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

ಸಾರ್ವಜನಿಕ ಶಿಕ್ಷಣ ಇಲಾಖೆಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಪ್ರೌಢ ದರ್ಜೆ ಉತ್ತೀರ್ಣತೆ ಅಥವಾ ಡಿಪ್ಲೊಮಾ ಕಮರ್ಷಿಯಲ್ ಪ್ರಾಕ್ಟೀಸ್ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

**ಆಯ್ಕೆ ವಿಧಾನ –**

ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) ನಿಯಮ 1982 ಮತ್ತು (ತಿದ್ದುಪಡಿ) ನಿಯಮ 2007 ಹಾಗೂ ಕಾಲಕಾಲಕ್ಕೆ ಆದ ತಿದ್ದುಪಡಿ ನಿಯಮಗಳ ಪ್ರಕಾರ.

(1) ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಪ್ರೌಢ ದರ್ಜೆ ವೇಗದಲ್ಲಿ ನೀಡುವ 15 ನಿಮಿಷಗಳ ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡತಕ್ಕದ್ದು.

(2) ಪ್ರತಿ ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳದ್ದಾಗಿದ್ದು ಪ್ರತಿ ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಠ 50 ಅಂಕಗಳನ್ನು ಅಭ್ಯರ್ಥಿಗಳು ಪಡೆಯಲೇಬೇಕಾಗಿರುತ್ತದೆ. ಅರ್ಹತಾ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳನ್ನು 1: 5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುತ್ತದೆ.

(3) ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾದವರು ಗಳಿಸಿರುವ ಶೇಕಡಾವಾರು ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

**3) ಬೆರಳಚ್ಚು – ನಕಲುಗಾರ ಹುದ್ದೆಗಳ ಸಂಖ್ಯೆ– 06**

**ಹುದ್ದೆಗಳ ವರ್ಗೀಕರಣ –**

| ವರ್ಗೀಕರಣ | ಮಹಿಳೆ | ಗ್ರಾಮೀಣ | ಇತರೆ | ಯೋಜನಾ ನಿರಾಶ್ರಿತರು | ಮಾಜಿ ಸೈನಿಕ | ಒಟ್ಟು |
|---|---|---|---|---|---|---|
| ಸಾ.ಅ. | 01 | 01 | -- | - | 01 | 03 |
| ಪರಿಶಿಷ್ಟ ಪಂಗಡ | - | - | 01 | - | - | 01 |
| ಪ್ರವರ್ಗ 2–ಎ | - | - | - | 01 | - | 01 |
| ಪ್ರವರ್ಗ 2–ಬಿ | 01 | - | - | - | - | 01 |
| ಒಟ್ಟು | 02 | 01 | 01 | 01 | 01 | 06 |

(1) ವೇತನ ಶ್ರೇಣಿ – 21400–500–22400–550–24600–27000–650–29600–750–32600–850–36000–950–39800–1100–42000 ಹಾಗೂ ಇತರೆ ಭತ್ಯೆಗಳು.

**(2) ಶೈಕ್ಷಣಿಕ ವಿದ್ಯಾರ್ಹತೆ –**

ಪದವಿಪೂರ್ವ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ಮೂರು ವರ್ಷಗಳ ಡಿಪ್ಲೊಮಾ ಕಮರ್ಷಿಯಲ್ ಪ್ರಾಕ್ಟೀಸ್ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

ಸಾರ್ವಜನಿಕ ಶಿಕ್ಷಣ ಇಲಾಖೆಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಪ್ರಥಮ ದರ್ಜೆ ಉತ್ತೀರ್ಣತೆ ಅಥವಾ ಡಿಪ್ಲೊಮಾ ಕಮರ್ಷಿಯಲ್ ಪ್ರಾಕ್ಟೀಸ್ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದಾರ್ಹತೆ.

**ಆಯ್ಕೆ ವಿಧಾನ –**

ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) ನಿಯಮ 1982 ಮತ್ತು (ತಿದ್ದುಪಡಿ) ನಿಯಮ 2007 ಹಾಗೂ ಕಾಲಕಾಲಕ್ಕೆ ಆದ ತಿದ್ದುಪಡಿ ನಿಯಮಗಳ ಪ್ರಕಾರ.

(1) ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಪ್ರಥಮ ದರ್ಜೆ ವೇಗದಲ್ಲಿ ನೀಡುವ 15 ನಿಮಿಷಗಳ ಉಕ್ತಲೇಖನವನ್ನು ಗಣಕಯಂತ್ರ ಗಳಮೂಲಕ ಬೆರಳಚ್ಚುಪಡಿಸತಕ್ಕದ್ದು.

(2) ಪ್ರತಿ ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳದ್ದಾಗಿದ್ದು ಪ್ರತಿ ಪರೀಕ್ಷೆಯಲ್ಲಿ ಉತ್ತೀರ್ಣತೆಗೆ ಕನಿಷ್ಠ 50 ಅಂಕಗಳನ್ನು ಅಭ್ಯರ್ಥಿಗಳು ಪಡೆಯಲೇಬೇಕಾಗಿರುತ್ತದೆ. ಅರ್ಹತಾ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳನ್ನು 1: 5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುತ್ತದೆ.

(3) ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾದವರು ಗಳಿಸಿರುವ ಶೇಕಡಾವಾರು ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

**4) ಆದೇಶ ಜಾರಿಗಾರ – ಹುದ್ದೆಯ ಸಂಖ್ಯೆ– 11**

**ಹುದ್ದೆಗಳ ವರ್ಗೀಕರಣ –**

| ವರ್ಗೀಕರಣ | ಮಹಿಳೆ | ಗ್ರಾಮೀಣ | ಇತರೆ | ಯೋಜನಾ ನಿರಾಶ್ರಿತರು | ಕನ್ನಡ ಮಾಧ್ಯಮ | ಮಾಜಿ ಸೈನಿಕ | ಒಟ್ಟು |
|---|---|---|---|---|---|---|---|
| ಸಾ.ಅ. | 02 | 01 | -- | - | 01 | 01 | 05 |
| ಪರಿಶಿಷ್ಟ ಜಾತಿ | - | 01 | 01- | - | | - | 02 |
| ಪರಿಶಿಷ್ಟ ಪಂಗಡ | - | 01 | - | - | - | - | 01 |
| ಪ್ರವರ್ಗ 2-ಎ | - | - | - | 01 | | - | 01 |
| ಪ್ರವರ್ಗ 3-ಎ | 01 | -- | - | - | | - | 01 |
| ಪ್ರವರ್ಗ 3-ಬಿ | - | - | 01 | - | | - | 01 |
| ಒಟ್ಟು | 03 | 03 | 02 | 01 | 01 | 01 | 11 |

(1) ವೇತನ ಶ್ರೇಣಿ – 19950-450-20400-500-22400-550-24600-600-27000-650-29600-750-32600-850-36000-950-37900 ಹಾಗೂ ಇತರೆ ಭತ್ಯೆಗಳು.

**ಆಯ್ಕೆ ವಿಧಾನ –**

(ಅ) ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) ನಿಯಮ 1982 ಮತ್ತು (ತಿದ್ದುಪಡಿ) ನಿಯಮ 2007 ಹಾಗೂ ಕಾಲಕಾಲಕ್ಕೆ ಆದ ತಿದ್ದುಪಡಿ ನಿಯಮಗಳ ಪ್ರಕಾರ.

(ಆ) ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಲಘು/ಭಾರೀ ವಾಹನ ಚಾಲನಾ ಪರವಾನಗಿ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

(ಇ) ಆದೇಶ ಜಾರಿಗಾರರ ಹುದ್ದೆಗೆ 10 ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 25 ಅಭ್ಯರ್ಥಿಗಳನ್ನು (1:25 ರ ಅನುಪಾತದಲ್ಲಿ) ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಮೇಲೆ ಆಯ್ಕೆ ಮಾಡಲಾಗುವುದು.

**5) ಚಾಲಕ– ಹುದ್ದೆಯ ಸಂಖ್ಯೆ– 01**

**ಹುದ್ದೆಗಳ ವರ್ಗೀಕರಣ –**

| ವರ್ಗೀಕರಣ | ಗ್ರಾಮೀಣ | ಒಟ್ಟು |
|---|---|---|
| ಸಾ.ಅ. | 01 | 01 |
| ಒಟ್ಟು | 01 | 01 |

(1) ವೇತನ ಶ್ರೇಣಿ – 21400–500–22400–550–24600–27000–650–29600–750–32600–850–36000–950–39800–1100–42000 ಹಾಗೂ ಇತರೆ ಭತ್ಯೆಗಳು.

**ಆಯ್ಕೆ ವಿಧಾನ –**

(ಅ) ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಲಘು / ಭಾರೀ ವಾಹನ ಚಾಲನಾ ಪರವಾನಗಿ ಹೊಂದಿರತಕ್ಕದ್ದು.

(ಆ) ಅರ್ಜಿ ಸಲ್ಲಿಸಲಾದ ಎಲ್ಲಾ ಅರ್ಹ ಅಭ್ಯರ್ಥಿಗಳಿಗೆ ಚಾಲನಾ ಪರೀಕ್ಷೆಯನ್ನು ನೀಡಲಾಗುವುದು, ಸದರಿ ಪರೀಕ್ಷೆಗೆ ಒಟ್ಟು 50 ಅಂಕಗಳನ್ನು ನಿಗದಿಪಡಿಸಿ, ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣರಾದವರು ಗಳಿಸಿರುವ ಶೇಕಡಾವಾರು ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 25 ಅಭ್ಯರ್ಥಿಗಳನ್ನು (1:25 ರ ಅನುಪಾತದಲ್ಲಿ) ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಮೇಲೆ ಆಯ್ಕೆ ಮಾಡಲಾಗುವುದು.

6) **ಜವಾನ – ಹುದ್ದೆಗಳ ಸಂಖ್ಯೆ– 05**

**ಹುದ್ದೆಗಳ ವರ್ಗೀಕರಣ –**

| ವರ್ಗೀಕರಣ | ಮಹಿಳೆ | ಗ್ರಾಮೀಣ | ಇತರೆ | ಕನ್ನಡ ಮಾಧ್ಯಮ | ಮಾಜಿ ಯೋಧ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|
| ಸಾ.ಅ. | 01 | 01 | – | – | – | – | 02 |
| ಪರಿಶಿಷ್ಟ ಜಾತಿ | -- | 01 | – | – | – | – | 01 |
| ಪ್ರವರ್ಗ –2 ಎ | 01 | -- | – | – | -- | – | 01 |
| ಪ್ರವರ್ಗ–2 ಬಿ | – | | 01 | – | – | – | 01 |
| ಒಟ್ಟು | 02 | 02 | 01 | -- | -- | -- | 05 |

(1) ವೇತನ ಶ್ರೇಣಿ – 17000–400–18600–450–20400–500–22400–550–24600–600–27000–650–28950 ಹಾಗೂ ಇತರೆ ಭತ್ಯೆಗಳು.

**ಆಯ್ಕೆ ವಿಧಾನ –**

(ಅ) ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರ ಹುದ್ದೆಗಳ) ನೇಮಕಾತಿ (ತಿದ್ದುಪಡಿ) ನಿಯಮಗಳು 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

(ಆ) ಜವಾನ ಹುದ್ದೆಗೆ 10 ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳನ್ನು (1:10 ರ ಅನುಪಾತದಲ್ಲಿ) ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಮೇಲೆ ಆಯ್ಕೆ ಮಾಡಲಾಗುವುದು.

7) **ವಯೋಮಿತಿ –**

(ಅ) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಠ 18 ವರ್ಷ ಪೂರೈಸಿರತಕ್ಕದ್ದು.

(ಬಿ) ಗರಿಷ್ಠ ವಯೋಮಿತಿ – ಸಾಮಾನ್ಯ ವರ್ಗ – 35 ವರ್ಷಗಳು

2 ಎ, 2 ಬಿ, 3 ಎ , 3 ಬಿ – 38 ವರ್ಷಗಳು

ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಪ್ರವರ್ಗ 1 - 40 ವರ್ಷಗಳು

ವಿಶೇಷ ಸೂಚನೆ – ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿ ಅವನು ಕೇಂದ್ರದ ನಿಯತ ಸೇನೆಯಲ್ಲಿ / ನೌಕಾಪಡೆಯಲ್ಲಿ / ವಾಯುಪಡೆಯಲ್ಲಿ ಎಷ್ಟು ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ ಮತ್ತು ವಿಧವೆಯರಿಗೆ ಮತ್ತು ಅಂಗವಿಕಲರಿಗೆ 10 ವರ್ಷಗಳ ಸಡಿಲಿಕೆ ಹಾಗೂ ಈಗಾಗಲೇ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು (ಈ ಬಗ್ಗೆ ಕೋರಿದಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು)

8) **ಅರ್ಜಿ ಸಲ್ಲಿಸುವ ವಿಧಾನ –**

ನಿಗದಿತ ಅರ್ಜಿ ಶುಲ್ಕ ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ –

| | |
|---|---|
| ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು | ರೂ. 200-000 |
| ಪ್ರವರ್ಗ-1, ಪ್ರವರ್ಗ-2 ಎ, 2 ಬಿ ಮತ್ತು 3 ಎ, 3 ಬಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಗೆ ಸೇರಿದ ಅಭ್ಯರ್ಥಿಗಳು | ರೂ. 100-00 |
| ಅಂಗವಿಕಲರ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಸುವುದರಿಂದ ವಿನಾಯಿತಿ ನೀಡಲಾಗಿದೆ. | |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್ ಸೈಟ್ **https://chikkaballapur.dcourts.gov.in/Judges/online-recruitment/** ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ State Bank Collect ಮೂಲಕ **online payment through net banking / credit card / debit card / UPI ID / QR Code** ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಶುಲ್ಕವನ್ನು ಆನ್ ಲೈನ್ ಮೂಲಕ ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ / ಪೋಸ್ಟಲ್ ಆರ್ಡರ್ / ಮನಿ ಆರ್ಡರ್ / ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

**ಅಭ್ಯರ್ಥಿಗಳು ಆನ್ ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

1) ಅಭ್ಯರ್ಥಿಗಳು ಅರ್ಜಿಯನ್ನು ಆನ್ ಲೈನ್ ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2) ಅಭ್ಯರ್ಥಿಗಳು ವಿವಿಧ ವರ್ಗಗಳಿಗೆ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಸದರಿ ಅರ್ಜಿಯಲ್ಲಿಯೇ ತಾವು ಕ್ಲೇಮು ಮಾಡುವ ತಮ್ಮ ಮೀಸಲಾತಿಗಳ ಬಗ್ಗೆ ನಮೂದಿಸತಕ್ಕದ್ದು.

3) ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಹಾಗೂ **ಇ-ಮೇಲ್ ಐಡಿಯನ್ನು** ಕಡ್ಡಾಯವಾಗಿ ನಮೂದಿಸುವುದು. ಒಂದು ವೇಳೆ **ಎಸ್ ಎಂ ಎಸ್ ಅಥವಾ ಇ-ಮೇಲ್** ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

4) ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು **scan** ಮಾಡಿ ಅಪ್ ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು ಅಳತೆಯಲ್ಲಿ **5 cm ಉದ್ದ x 3.6 cm** ಅಗಲವುಳ್ಳದ್ದಾಗಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು **scan** ಮಾಡಿ ಅರ್ಜಿಗೆ ಅಪ್ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ **(2.5 cm ಉದ್ದ x 7.5 cm)** ಅಗಲವುಳ್ಳದ್ದಾಗಿರಬೇಕು ಮತ್ತು **26 kb** ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿ ಅಪ್ ಲೋಡ್ ಮಾಡಬೇಕು.

5) ತದನಂತರ ಅಭ್ಯರ್ಥಿಯು ಆನ್ ಲೈನ್ ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್ ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

7) ನ್ಯಾಯಾಲಯದ ಅಧಿಕೃತ ವೆಬ್ ಸೈಟ್ ನಲ್ಲಿ ಅರ್ಜಿಯನ್ನು ಆನ್ ಲೈನ್ ಮೂಲಕ ನೋಂದಾಯಿಸಲು / ಸಲ್ಲಿಸಲು **ದಿನಾಂಕ** 17/01/2024 **ರಾತ್ರಿ** 11.59 ವರೆಗೆ ಅವಕಾಶವಿರುತ್ತದೆ. ಶುಲ್ಕವನ್ನು **online payment through net banking / credit card / debit card / UPI ID / QR Code** ಮುಖಾಂತರ ಪಾವತಿಲು **ದಿನಾಂಕ** 18/01/2024 **ಕಡೆಯ ದಿನಾಂಕವಾಗಿದ್ದು** ಅದರೊಳಗೆ ಪಾವತಿಸತಕ್ಕದ್ದು.

8) ಅರ್ಹ ಅಭ್ಯರ್ಥಿಗಳಿಗೆ **ಎಸ್ ಎಂ ಎಸ್ ಮತ್ತು ಇ–ಮೇಲ್** ಮುಖಾಂತರ ಮಾತ್ರ ಮಾಹಿತಿ ನೀಡಲಾಗುವುದು. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್ ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಅರ್ಹತಾ ಪರೀಕ್ಷೆಗೆ / ಸಂದರ್ಶನಕ್ಕೆ ಕರೆಯಲಾಗುವುದು. ಅರ್ಹತಾ ಪರೀಕ್ಷೆಗೆ ಅಥವಾ ಸಂದರ್ಶನದ ಮಾಹಿತಿಯನ್ನು ಪತ್ರ ವ್ಯವಹಾರದ ಮೂಲಕ ಮಾಡಲಾಗುವುದಿಲ್ಲ..

9) ಆನ್ ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

10) ಸೇವಾ ನಿರತ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ "ನಿರಾಕ್ಷೇಪಣಾ ಪ್ರಮಾಣ ಪತ್ರ" ವನ್ನು ಸದರಿ ಹುದ್ದೆಗೆ ಆಯ್ಕೆಯಾದ ಪಕ್ಷದಲ್ಲಿ ಆಯ್ಕೆ ಪಟ್ಟಿ ಪ್ರಕಟವಾದ 30 ದಿನಗಳೊಳಗೆ ಪಡೆಯತಕ್ಕದ್ದು.

11) ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗಳಿಗಾಗಿ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು

ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

12) ವಿವಿಧ ಮೀಸಲಾತಿ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು. ಗ್ರಾಮೀಣ / ಪ್ರವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

13) ಮೇಲ್ಕಂಡ ಕ್ರಮ ಸಂಖ್ಯೆ 11 ರ ಅಡಿಯಲ್ಲಿ ಪ್ರಯೋಜನಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆ ಸಕ್ಷಮ ಪ್ರಾಧಿಕಾರಿಗಳು ನೀಡಿದ ಸಂಬಂಧಪಟ್ಟ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.

14) ವಿಕಲಚೇತನರು / ಮಾಜಿ ಸೈನಿಕರು / ವಿಧವೆಯರು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು.

15) ಅಭ್ಯರ್ಥಿಗಳು ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಶೈಕ್ಷಣಿಕ ವಿದ್ಯಾರ್ಹತೆ, ಜನ್ಮ ದಿನಾಂಕವನ್ನು ತೋರಿಸಲು ಎಸ್ ಎಸ್ ಎಲ್ ಸಿ ಅಥವಾ ತತ್ಸಮಾನ ಪ್ರಮಾಣ ಪತ್ರ, ದ್ವಿತೀಯ ಪಿ ಯು ಸಿ ಪರೀಕ್ಷೆಯ ಪ್ರಮಾಣ ಪತ್ರ, ಶೀಘ್ರಲಿಪಿ ಮತ್ತು ಬೆರಳಚ್ಚು ಪರೀಕ್ಷೆಗಳ ಪ್ರಮಾಣ ಪತ್ರಗಳು, ಗ್ರಾಮೀಣ ಪ್ರಮಾಣ ಪತ್ರಗಳು, ಜಾತಿ ಪ್ರಮಾಣ ಪತ್ರ, ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಯಾಬೇಕಾಗುತ್ತದೆ.

16) ಅಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

17) ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರ ಪ್ರಕಾರ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ

ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

18) ಶೀಘ್ರಲಿಪಿಗಾರ ಮತ್ತು ಬೆರಳಚ್ಚುಗಾರ ಹುದ್ದೆಗೆ ಆಯ್ಕೆ ಯಾದ ಅಭ್ಯರ್ಥಿಗಳು ಆಯ್ಕೆ ಯಾದ ಮೂರು ತಿಂಗಳ ಒಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಸರ್ಕಾರದ ಆದೇಶದ ಪ್ರಕಾರ ಉತ್ತೀರ್ಣರಾಗತಕ್ಕದ್ದು.

ಸಹಿ/-
(ಎನ್.ವಿ.ಭವಾನಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಚಿಕ್ಕಬಳ್ಳಾಪುರ

ಪ್ರತಿಯನ್ನು ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.

ಪ್ರತಿಯನ್ನು ಮಾಹಿತಿಗಾಗಿ –

1) ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ಬೆಂಗಳೂರು.

2) ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು.

3) ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಚಿಕ್ಕಬಳ್ಳಾಪುರ.

4) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಚಿಕ್ಕಬಳ್ಳಾಪುರ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.

5) ಪ್ರಧಾನ ನಗರ ವ್ಯವಹಾರ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಮಗಳೂರು, ಶಿವಮೊಗ್ಗ , ಚಿತ್ರದುರ್ಗ, ದಕ್ಷಿಣ ಕನ್ನಡ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕಲಬುರಗಿ, ಕಾರವಾರ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ರಾಮನಗರ, ತುಮಕೂರು, ಉಡುಪಿ, ವಿಜಯಪುರ, ಯಾದಗಿರಿ ಇವರಿಗೆ ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.

6) ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು.